**ಕರ್ನಾಟಕ ಸರ್ಕಾರ**

ಸಂಖ್ಯೆ: ಅಪಜೀ 113 ಎಫ್‌ಡಬ್ಲ್ಯೂಎಲ್ 2023

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:23-11-2023.

**ಇವರಿಂದ,**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಅರಣ್ಯ, ಜೀವಿಪರಿಸ್ಥಿತಿ & ಪರಿಸರ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು-560 001.

**ಇವರಿಗೆ,**
ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯಪಡೆ ಮುಖ್ಯಸ್ಥರು),
ಅರಣ್ಯ ಭವನ, ಮಲ್ಲೇಶ್ವರಂ,
ಬೆಂಗಳೂರು-560 003.

**ಮಾನ್ಯರೇ,**

**ವಿಷಯ:-** ಮಾನವ-ವನ್ಯಪ್ರಾಣಿ ಸಂಘರ್ಷ ಹೆಚ್ಚಾಗಿರುವ ಜಿಲ್ಲೆಗಳಿಗೆ ನೋಡಲ್ ಆಫೀಸರ್‌ಗಳನ್ನು ನೇಮಿಸುವ ಕುರಿತು.

**ಉಲ್ಲೇಖ:-** ತಮ್ಮ ಏಕ ಕಡತ ಸಂಖ್ಯೆ: KFD/WL/B1(MSC)/4/2023(1241170), ದಿನಾಂಕ:23/11/2023.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ತಮ್ಮ ಏಕ ಕಡತದಲ್ಲಿ ಸಲ್ಲಿಸಲಾಗಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಜಿಲ್ಲೆಗಳಿಗೆ ವಿವಿಧ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ:-

| ಕ್ರ. ಸಂ. | ಜಿಲ್ಲೆ | ನೋಡಲ್ ಆಫೀಸರ್ ಆಗಿ ನೇಮಿಸಿರುವ ಅಧಿಕಾರಿ ಹೆಸರು |
|---|---|---|
| 1 | Kolar | Smt. Geethanjali |
| 2 | Tumkur | Smt. Smita Bijjur |
| 3 | Bangalore Rural | Smt. Vanashree Vipin Singh |
| 4 | Ramnagar | Sri Anil Kumar Ratan |
| 5 | Hassan | Sri Kumar Pushkar |
| 6 | Chikmagaluru | Sri Vijay Mohan Raj |
| 7 | Mysore | Smt. Saswati Mishra |
| 8 | Chamrajnagar | Sri Bishwajit Mishra |
| 9 | Kodagu | Sri Brijesh Kumar |

(1) ನೋಡಲ್ ಅಧಿಕಾರಿಗಳು ಅವರಿಗೆ ವಹಿಸಲಾದ ಜಿಲ್ಲೆಗೆ ವಾರದಲ್ಲಿ 03 ದಿನ ಕ್ಷೇತ್ರ ಭೇಟಿ ನೀಡುವುದು.

(2) ಕ್ಷೇತ್ರ ಭೇಟಿ ಸಮಯದಲ್ಲಿ ಮಾನವ-ವನ್ಯಪ್ರಾಣಿ ಸಂಘರ್ಷ ಕುರಿತಂತೆ ಪರಿಶೀಲನಾ ಸಭೆ ನಡೆಸುವುದು. ಜಿಲ್ಲೆಯಲ್ಲಿ ಬಾಕಿ ಇರುವ ವಿವಿಧ ಪರಿಹಾರಾತ್ಮಕ ಧನ ಪಾವತಿಸುವ ಪ್ರಕರಣಗಳ ಕುರಿತು ವಿಶೇಷವಾಗಿ ಪರಿಶೀಲಿಸುವುದು.

......2

(3) ಜಿಲ್ಲೆಯಲ್ಲಿ ಮಾನವ-ವನ್ಯಪ್ರಾಣಿ ಸಂಘರ್ಷ ತಡೆಗಟ್ಟುವ/ ನಿಭಾಯಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮತ್ತು ಇನ್ನಿತರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಯೋಜನೆ ತಯಾರಿಸಿ ಸಲ್ಲಿಸುವುದು.

(4) ನೋಡಲ್ ಅಧಿಕಾರಿಗಳು ಕ್ಷೇತ್ರ ಭೇಟಿಯ ವರದಿಯನ್ನು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು) ಮತ್ತು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ವನ್ಯಜೀವಿ) ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರು, ಇವರಿಗೆ ಸಲ್ಲಿಸುವುದು.

(5) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಜಿಲ್ಲೆಗಳ ವರದಿಗಳನ್ನು ಅವಲೋಕಿಸಿ ರಾಜ್ಯಮಟ್ಟದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಮಗ್ರ ವರದಿ ತಯಾರಿಸಿ ಸರ್ಕಾರಕ್ಕೆ ಸಲ್ಲಿಸುವುದು.

ತಮ್ಮ ನಂಬುಗೆಯ,

23/11/2023

(ಜಿ. ಮಂಜುಳ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ.
(ಅರಣ್ಯ-ಎ)